# All India Radio: Bangalore
# National Bulletin In Kannada
# 01.04.2026 19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

***************

ಮುಖ್ಯಾಂಶಗಳು

೧. ರಾಜ್ಯಸಭೆಯಲ್ಲಿಂದು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಮಸೂದೆ ೨೦೨೬ ಅಂಗೀಕಾರ

೨. ದೇಶದಲ್ಲಿ ಬೆಳೆಗಳ ಬೀಜಗಳು, ರಸಗೊಬ್ಬರ ದಾಸ್ತಾನು ಸಾಕಷ್ಟು ಪ್ರಮಾಣದಲ್ಲಿ ಲಭ್ಯ - ಕೇಂದ್ರ ಸರ್ಕಾರ

೩. ಅಸ್ಸಾಂ, ಕೇರಳ, ಪುದುಚೆರಿ ವಿಧಾನಸಭೆ ಚುನಾವಣೆ; ಬಿರುಸುಗೊಂಡ ಪ್ರಚಾರ

೪. ಐಪಿಎಲ್ ಟಿ-೨೦ ಕ್ರಿಕೆಟ್; ಲಖ್ನೋ ಸೂಪರ್ ಜೇಂಟ್ಸ್ ವಿರುದ್ಧ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ

***************

ರಾಜ್ಯಸಭೆ ಇಂದು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಮಸೂದೆ ೨೦೨೬ ಅನ್ನು ಧ್ವನಿ ಮತದೊಂದಿಗೆ ಅಂಗೀಕರಿಸಿತು. ಕೇಂದ್ರ ಗೃಹ ವ್ಯವಹಾರಗಳ ರಾಜ್ಯ ಸಚಿವ ನಿತ್ಯಾನಂದ ರೈ ಕಳೆದ ವಾರ ಮಸೂದೆಯನ್ನು ಮಂಡಿಸಿದ್ದರು. ಈ ಮಸೂದೆಯು ಗ್ರೂಪ್ ಎ ಜನರಲ್ ಡ್ಯೂಟಿ ಅಧಿಕಾರಿಗಳು ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿನ ಇತರ ಅಧಿಕಾರಿಗಳ ನೇಮಕಾತಿ ಮತ್ತು ಸೇವಾ ಷರತ್ತುಗಳನ್ನು ಒಳಗೊಂಡ ಸಾಮಾನ್ಯ ನಿಯಮಗಳನ್ನು ನಿಯಂತ್ರಿಸುವ ಗುರಿಯನ್ನು ಹೊಂದಿದೆ. ಮಸೂದೆ ಮೇಲಿನ ಚರ್ಚೆಗೆ ಉತ್ತರಿಸಿದ ಸಚಿವ ನಿತ್ಯಾನಂದ ರೈ, ಈ ಮಸೂದೆಯು ಭಾರತದ ಆಂತರಿಕ ಭದ್ರತಾ ಚೌಕಟ್ಟನ್ನು ಬಲಪಡಿಸುವ ಸಿಎಪಿಎಫ್ ಅಧಿಕಾರಿಗಳ ಸೇವೆಗೆ ಹೆಚ್ಚಿನ ಸ್ಥಿರತೆಯನ್ನು ತರುವ ಗುರಿಯನ್ನು ಹೊಂದಿದೆ ಎಂದು ಹೇಳಿದರು.

***************

ಲೋಕಸಭೆಯಲ್ಲಿಂದು ಆಂಧ್ರಪ್ರದೇಶ ಪುನರ್ ರಚನಾ ತಿದ್ದುಪಡಿ ಮಸೂದೆ-೨೦೨೬ ಅನ್ನು ಅಂಗೀಕರಿಸಲಾಯಿತು. ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಈ ಮಸೂದೆ ಮಂಡಿಸಿದರು.

ಅಮರಾವತಿಯನ್ನು ಆಂಧ್ರಪ್ರದೇಶದ ಏಕಮಾತ್ರ ರಾಜಧಾನಿಯಾಗಿ ಮಾನ್ಯಗೊಳಿಸುವ ಉದ್ದೇಶವನ್ನು ಈ ಮಸೂದೆ ಹೊಂದಿದೆ. ಇದರ ಜಾರಿ ಮೂಲಕ ರಾಜಧಾನಿಯನ್ನು ಬದಲಾಯಿಸಲು ಸಾಧ್ಯವಾಗುವುದಿಲ್ಲ.

ಕೇಂದ್ರ ಕಲ್ಲಿದ್ದಲು ಸಚಿವ ಜಿ.ಕಿಶನ್ ರೆಡ್ಡಿ ಮಾತನಾಡಿ, ಅವಿಭಜಿತ ಆಂಧ್ರಪ್ರದೇಶ ಎರಡು ಭಾಗವಾದ ಸಂದರ್ಭದಲ್ಲಿ ತೆಲಂಗಾಣ ಅಭಿವೃದ್ಧಿಯಲ್ಲಿ ಹಿಂದುಳಿದಿತ್ತು. ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ, ಅಧಿಕಾರಕ್ಕೆ ಬಂದ ನಂತರ ತೆಲಂಗಾಣದಲ್ಲಿ ಅಭಿವೃದ್ಧಿ ಯೋಜನೆಗಳು ಕಾರ್ಯಗತಗೊಳ್ಳುತ್ತಿವೆ ಎಂದು ಹೇಳಿದರು.

ಬಿಜೆಪಿ ಸದಸ್ಯೆ ಡಿ.ಪುರಂದರೇಶ್ವರಿ ಮಾತನಾಡಿ, ಈ ಹಿಂದೆ ಚಂದ್ರಬಾಬು ನಾಯ್ಡು ನೇತೃತ್ವದ ಸರ್ಕಾರ ಅಮರಾವತಿಯನ್ನು ರಾಜಧಾನಿಯನ್ನಾಗಿ ಘೋಷಿಸಿತ್ತಾದರೂ ನಂತರ ಅಧಿಕಾರಕ್ಕೆ ಬಂದ ಱSಖಅP ಸರ್ಕಾರ, ವಿಕೇಂದ್ರೀಕರಣದ ಹೆಸರಿನಲ್ಲಿ ತನ್ನ ಹಿತಾಸಕ್ತಿಗಾಗಿ ಮೂರು ರಾಜಧಾನಿಗಳನ್ನು ಮಾಡುವ ನಿರ್ಣಯ ತೆಗೆದುಕೊಂಡಿತು. ಹೊಸ ಮಸೂದೆ ಮೂಲಕ ಈ ತೊಡಕುಗಳಿಗೆ ಪರಿಹಾರ ದೊರಕಲಿವೆ ಎಂದು ಆಶಿಸಿದರು.

ನಂತರ ಮಸೂದೆಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

***************

ಕಳೆದ ಹಣಕಾಸು ವರ್ಷದಲ್ಲಿ ರೈಲು ಅಪಘಾತಗಳು ಗಣನೀಯವಾಗಿ ಇಳಿಕೆಯಾಗಿವೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಸಚಿವರು, ಕಳೆದ ಆರ್ಥಿಕ ವರ್ಷದಲ್ಲಿ ೭೬ ಸಾವಿರದ ೩೫೨ ವಿಶೇಷ ರೈಲು ಸೇವೆಗಳನ್ನು ಒದಗಿಸಲಾಗಿದ್ದು, ಸದ್ಯ ರೈಲ್ವೆ ಜಾಲದಲ್ಲಿ ೨೫ ಸಾವಿರಕ್ಕೂ ಹೆಚ್ಚು ರೈಲುಗಳು ಸಂಚರಿಸುತ್ತಿವೆ ಎಂದು ಹೇಳಿದರು.

ಬಜೆಟ್‌ನಲ್ಲಿ ರೈಲ್ವೆ ಅಭಿವೃದ್ಧಿಗೆ ದಾಖಲೆಯ ಅನುದಾನ ಹಂಚಿಕೆ ಮಾಡಲಾಗಿದೆ. ರೈಲ್ವೆಯಲ್ಲಿ ಹೆಚ್ಚಿನ ಬಂಡವಾಳ ಹೂಡಿಕೆಯಿಂದ ಬಡವರು ಮತ್ತು ಮಧ್ಯಮ ವರ್ಗದವರಿಗೆ ಪ್ರಯೋಜನವಾಗುತ್ತಿದೆ ಎಂದರು.

ಪ್ರಶ್ನೋತ್ತರ ಕಲಾಪದ ನಡುವೆ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳ ಸದಸ್ಯರು ವಿದೇಶಿ ದೇಣಿಗೆ ನಿಯಂತ್ರಣ ತಿದ್ದುಪಡಿ ಮಸೂದೆ ವಿರೋಧಿಸಿ, ಘೋಷಣೆಗಳನ್ನು ಕೂಗಿದರು.

ಪ್ರತಿಪಕ್ಷಗಳ ನಡೆಗೆ ಆಕ್ಷೇಪ ವ್ಯಕ್ತಪಡಿಸಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಈ ಮಸೂದೆಯನ್ನು ವಿದೇಶಿ ದೇಣಿಗೆ ನಿಯಂತ್ರಿಸಲು ಜಾರಿಗೆ ತರಲಾಗುತ್ತಿದೆ. ರಾಷ್ಟ್ರೀಯ ಭದ್ರತೆ ಮತ್ತು ಹಿತಾಸಕ್ತಿ ದೃಷ್ಟಿಯಿಂದ ಮಸೂದೆಗೆ ತಿದ್ದುಪಡಿ ಅಗತ್ಯವಾಗಿದೆ ಎಂದು ಪ್ರತಿಪಾದಿಸಿದರು.

ಯಾವುದೇ ಧರ್ಮ ಅಥವಾ ಸಮುದಾಯವನ್ನು ಗುರಿಯಾಗಿಸಿಕೊಂಡು ಮಸೂದೆ ಜಾರಿ ಮಾಡುತ್ತಿಲ್ಲ. ಕೇರಳದಲ್ಲಿ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮತ್ತು ಸಿಪಿಎಂ ಈ ವಿಷಯವಾಗಿ ಜನರನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿವೆ ಎಂದು ಆರೋಪಿಸಿದರು.

***************

ಚಲನಚಿತ್ರ ಕುರಿತ ಅಭಿವೃದ್ಧಿ, ಸಂವಹನ ಮತ್ತು ಪ್ರಸರಣ-ಡಿಸಿಡಿಎಫ್‌ಸಿ ಯೋಜನೆಯ ಮೂಲಕ ಸರ್ಕಾರ, ಚಲನಚಿತ್ರ ನಿರ್ಮಾಣ ಪರಿಸರ ವ್ಯವಸ್ಥೆಯನ್ನು ಸಕ್ರಿಯವಾಗಿ ಬೆಂಬಲಿಸುತ್ತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ಲೋಕಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಡಿಸಿಡಿಎಫ್‌ಸಿ ಯೋಜನೆಯು ಕೇಂದ್ರ ಸರ್ಕಾರದಿಂದ ೧೦೦ ಪ್ರತಿಶತ ಧನಸಹಾಯ ಪಡೆದ ಕೇಂದ್ರ ವಲಯದ ಯೋಜನೆಯಾಗಿದ್ದು, ಸಿನಿಮಾ ಶ್ರೇಷ್ಠತೆಯನ್ನು ಬೆಳೆಸಲು ನೇರ ಆರ್ಥಿಕ ನೆರವು ನೀಡುತ್ತದೆ ಎಂದು ತಿಳಿಸಿದರು.

ಡಿಸಿಡಿಎಫ್‌ಸಿ ಯೋಜನೆಯಡಿಯಲ್ಲಿ, ರಾಷ್ಟ್ರೀಯ ಚಲನಚಿತ್ರ ಅಭಿವೃದ್ಧಿ ನಿಗಮ-ಎನ್‌ಎಫ್‌ಡಿಸಿ ಮೂಲಕ ಸರ್ಕಾರ, ಸಿನಿಮಾ ನಿರ್ಮಾಣವನ್ನು ಸಹ ಸುಗಮಗೊಳಿಸುತ್ತಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

***************

ಪಶ್ಚಿಮ ಏಷ್ಯಾ ಸಂಘರ್ಷದ ನಡುವೆಯೂ ದೇಶದಲ್ಲಿ ಎಲ್ಲಾ ರೀತಿಯ ಬೆಳೆಗಳ ಬೀಜಗಳ ದಾಸ್ತಾನು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಡಾ.ಮಣಿಂದರ್ ಕೌರ್ ದ್ವಿವೇದಿ, ದೇಶಾದ್ಯಂತ ೧ಲ೫ ಲಕ್ಷ ಕ್ವಿಂಟಾಲ್‌ಗೂ ಹೆಚ್ಚು ಮುಂಗಾರು ಬೆಳೆಗಳ ಬೀಜಗಳು ಲಭ್ಯವಿದೆ. ದೇಶದಲ್ಲಿ ರಸಗೊಬ್ಬರ ಕೂಡ ಸಾಕಷ್ಟು ಲಭ್ಯವಿದೆ ಎಂದು ಮಾಹಿತಿ ನೀಡಿದರು.

ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ, ದೇಶದಲ್ಲಿ ಪ್ರಸ್ತುತ ಕಚ್ಚಾ ತೈಲ ದಾಸ್ತಾನು ಸಾಕಷ್ಟಿದೆ. ಮುಂದಿನ ಎರಡು ತಿಂಗಳವರೆಗೆ ಸಾಕಷ್ಟು ಕಚ್ಚಾ ತೈಲ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ವ್ಯವಸ್ಥೆ ಮಾಡಿದೆ ಎಂದು ಹೇಳಿದರು.

ದೇಶದ ಸಂಸ್ಕರಣಾಗಾರಗಳು ಅತ್ಯುತ್ತಮ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಇಂಧನ ಕೊರತೆಯ ಯಾವುದೇ ನಿದರ್ಶನಗಳು ವರದಿಯಾಗಿಲ್ಲ ಎಂದು ಅವರು ತಿಳಿಸಿದರು.

***************

ಅಸ್ಸಾಂ, ಕೇರಳ ಮತ್ತು ಪುದುಚೇರಿಯಲ್ಲಿ ವಿಧಾನಸಭಾ ಚುನಾವಣೆಗೆ ಪ್ರಚಾರ ತೀವ್ರಗೊಂಡಿದೆ. ಅಸ್ಸಾಂನ ೧೨೬ ಕ್ಷೇತ್ರಗಳು, ಕೇರಳದ ೧೪೦ ಸ್ಥಾನಗಳು ಮತ್ತು ೩೦ ಸದಸ್ಯರ ಪುದುಚೇರಿ ವಿಧಾನಸಭೆಗೆ ಈ ತಿಂಗಳ ೯ ರಂದು ಒಂದೇ ಹಂತದ ಮತದಾನ ನಡೆಯಲಿದೆ. ಪ್ರಧಾನಿ ಮತ್ತು ಹಿರಿಯ ಬಿಜೆಪಿ ನಾಯಕ ನರೇಂದ್ರ ಮೋದಿ ಇಂದು ಅಸ್ಸಾಂನಲ್ಲಿ ಎರಡು ಚುನಾವಣಾ ಪ್ರಚಾರ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಗೋಗಮುಖ್‌ನಲ್ಲಿ ತಮ್ಮ ಮೊದಲ ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಿದ ಅವರು, ಅಸ್ಸಾಂನಲ್ಲಿ ಕಳೆದ ಹತ್ತು ವರ್ಷಗಳ ಎನ್‌ಡಿಎ ಆಡಳಿತದಲ್ಲಿ, ರಾಜ್ಯ ಗಮನಾರ್ಹ ಪ್ರಗತಿಯನ್ನು ಕಂಡಿದೆ. 'ಡಬಲ್ ಎಂಜಿನ್' ಸರ್ಕಾರ, ರಾಜ್ಯಕ್ಕೆ ಶಾಶ್ವತ ಶಾಂತಿಯನ್ನು ತರಲು ಸಹಾಯ ಮಾಡಿದೆ. ಅನೇಕ ಯುವಕರು ಹಿಂಸಾಚಾರದಿಂದ ದೂರ ಸರಿಯುತ್ತಿದ್ದಾರೆ ಎಂದು ಹೇಳಿದರು.

ಅಸ್ಸಾಂ- ಜಾಗತಿಕವಾಗಿ ಚಹಾಕ್ಕೆ ಹೆಸರುವಾಸಿಯಾಗಿದೆ. ಮೋರಿಗಾಂವ್‌ನಲ್ಲಿ ಮುಂಬರುವ ಸೆಮಿಕಂಡಕ್ಟರ್ ಸ್ಥಾವರದೊಂದಿಗೆ, ರಾಜ್ಯವು ಶೀಘ್ರದಲ್ಲೇ ಸೆಮಿಕಂಡಕ್ಟರ್ ಚಿಪ್‌ಗಳಿಗೆ ಮನ್ನಣೆ ಪಡೆಯಲಿದೆ ಎಂದು ತಿಳಿಸಿದರು.

ನಂತರ, ಬಿಸ್ವಾನಾಥ್‌ನಲ್ಲಿ ತಮ್ಮ ಎರಡನೇ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, 'ಆತ್ಮನಿರ್ಭರ ಅಸ್ಸಾಂ' ನಿರ್ಮಿಸುವುದು ಬಿಜೆಪಿಯ ದೂರದೃಷ್ಟಿ. ಅಸ್ಸಾಂ ಅನ್ನು ಅಕ್ರಮ ವಲಸೆಯಿಂದ ಮುಕ್ತಗೊಳಿಸಲು ಮತ್ತು ಸ್ಥಳೀಯ ಸಮುದಾಯಗಳ ಭೂ ಹಕ್ಕುಗಳನ್ನು ರಕ್ಷಿಸಲು ತಮ್ಮ ಸರ್ಕಾರ ಕೆಲಸ ಮಾಡುತ್ತದೆ ಎಂದು ಭರವಸೆ ನೀಡಿದರು.

ಕಾಂಗ್ರೆಸ್ ಹಿರಿಯ ನಾಯಕಿ ಪ್ರಿಯಾಂಕಾ ವಾದ್ರಾ ಇಂದು ಅಸ್ಸಾಂಗೆ ಒಂದು ದಿನದ ಭೇಟಿಯ ಸಂದರ್ಭದಲ್ಲಿ ಸಾರ್ವಜನಿಕ ಸಭೆಗಳನ್ನುದ್ದೇಶಿಸಿ ಮಾತನಾಡಿದರು.

ಶಿವಸಾಗರ್ ಜಿಲ್ಲೆಯಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದ ಪ್ರಿಯಾಂಕಾ ವಾದ್ರಾ, ಹೆಚ್ಚುತ್ತಿರುವ ಜೀವನ ವೆಚ್ಚಗಳು ನಾಗರಿಕರ ಮೇಲೆ ಹೊರೆಯಾಗಿವೆ. ಬಿಜೆಪಿಯ ನೀತಿಗಳು ಜನ ವಿರೋಧಿಯಾಗಿವೆ ಎಂದು ದೂರಿದರು.

***************

ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಸಿ.ಬಿ.ಜಾರ್ಜ್ ಅವರು ಇಂದು ತಜಿಕಿಸ್ತಾನ್ ವಿದೇಶಾಂಗ ಸಚಿವ ಸಿರೋಜಿದ್ದೀನ್ ಮುಹ್ರಿದ್ದೀನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಸಭೆಯಲ್ಲಿ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಲಾಯಿತು. ಸಾಮಾನ್ಯ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಬಳಿಕ ಸಿ.ಬಿ.ಜಾರ್ಜ್ ಮತ್ತು ವಿದೇಶಾಂಗ ವ್ಯವಹಾರಗಳ ಉಪ ಸಚಿವ ಇದಿಬೆಕ್ ಕಲಂದರ್ ಅವರ ಸಹ-ಅಧ್ಯಕ್ಷತೆಯಲ್ಲಿ ದುಶಾಂಬೆಯಲ್ಲಿ ಭಾರತ-ತಜಿಕಿಸ್ತಾನ್ ವಿದೇಶಾಂಗ ಕಚೇರಿಯ ೫ನೇ ಸುತ್ತಿನ ಸಮಾಲೋಚನೆ ನಡೆಸಲಾಯಿತು.

ಉಭಯ ದೇಶಗಳ ನಡುವಿನ ವ್ಯಾಪಾರ ಮತ್ತು ಆರ್ಥಿಕ ಸಂಬಂಧಗಳು, ವಿಜ್ಞಾನ ಮತ್ತು ತಂತ್ರಜ್ಞಾನ, ಫಿನ್‌ಟೆಕ್, ಔಷಧಗಳು, ಸಂಸ್ಕೃತಿ ಮತ್ತು ಜನರಿಂದ ಜನರ ಸಂಬಂಧಗಳಂತಹ ಪರಸ್ಪರ ಆಸಕ್ತಿಯ ಕ್ಷೇತ್ರಗಳನ್ನು ಒಳಗೊಂಡ ದ್ವಿಪಕ್ಷೀಯ ಸಂಬಂಧಗಳನ್ನು ಸಮಗ್ರವಾಗಿ ಪರಿಶೀಲಿಸಲಾಯಿತು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ಉತ್ತರ ಪ್ರದೇಶದ ಲಖ್ನೋದಲ್ಲಿರುವ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ೫ನೇ ಪಂದ್ಯದಲ್ಲಿ ಲಖ್ನೋ ಸೂಪರ್ ಜೇಂಟ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

ಮಂಗೋಲಿಯಾದ ಉಲಾನ್‌ಬತಾರ್‌ನಲ್ಲಿ ಇಂದು ನಡೆದ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನಲ್ಲಿ, ಭಾರತೀಯ ಬಾಕ್ಸರ್‌ಗಳಾದ ಸಚಿನ್ ಸಿವಾಚ್ ಮತ್ತು ವಿಶ್ವನಾಥ್ ಸುರೇಶ್ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದಿದ್ದಾರೆ.

೬೦ ಕೆಜಿ ವಿಭಾಗದ ೧೬ ರ ಸುತ್ತಿನಲ್ಲಿ ಸಚಿನ್ ಸಿವಾಚ್ ಅವರು, ಬುಯಾಂಡಲೈ ಬಾಯಾರ್ಖು ವಿರುದ್ಧ ೪-೧ ಅಂತರದಲ್ಲಿ ಗೆಲುವು ಸಾಧಿಸಿ, ಕೊನೆಯ ಎಂಟರ ಘಟ್ಟ ತಲುಪಿದರು. ಅವರು ಮುಂದಿನ ಸುತ್ತಿನಲ್ಲಿ ಚೆಂಗ್-ವೀ ಲೀ ಅವರನ್ನು ಎದುರಿಸಲಿದ್ದಾರೆ.

ಬೆಕ್ಜಾತ್ ಎರ್ಗೆಶೋವ್ ವಿರುದ್ಧ ೫-೦ ಅಂತರದಿಂದ ವಿಶ್ವನಾಥ್ ಸುರೇಶ್ ನಿರ್ಣಾಯಕ ಗೆಲುವಿನೊಂದಿಗೆ ಕ್ವಾರ್ಟರ್ ಫೈನಲ್‌ಗೆ ಮುನ್ನಡೆದರು. ಅವರು ಮುಂದಿನ ಸುತ್ತಿನಲ್ಲಿ ಹಾಲಿ ವಿಶ್ವ ಚಾಂಪಿಯನ್ ಸಂಝಾರ್ ತಾಷ್ಕೆನ್‌ಬೇ ಅವರನ್ನು ಎದುರಿಸಲಿದ್ದಾರೆ.

*******ಮುಕ್ತಾಯ********